**5117 (5341) ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ):** ಮಾನ್ಯ ಸಮಾಜ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪರಿಶಿಷ್ಟ ಜಾತಿ: ಪಂಗಡಗಳ ಅಭಿವೃದ್ಧಿ ನಿಗಮದ ಮೇಲೆ ಲೋಕಯುಕ್ತರವರು ದಾಳಿ ನಡೆಸಿದ್ದು ಯಾವಾಗ?

ಆ) ದಾಳಿ ಸಂದರ್ಭದಲ್ಲಿ ಪತ್ತೆ ಹಚ್ಚಲಾದ ಅಕ್ರಮಗಳು ಯಾವುವು: (ವಿವರ ನೀಡುವುದು)

ಇ) ಪತ್ತೆ ಹಚ್ಚಲಾದ ಅಕ್ರಮಗಳ ಬಗ್ಗೆ ಲೋಕಾಯುಕ್ತರವರು ಸರ್ಕಾರಕ್ಕೆ ನೀಡಿರುವ ವರದಿಯ ಪ್ರಮುಖ ಅಂಶಗಳೇನು:

ಈ) ಲೋಕಾಯುಕ್ತರವರ ವರದಿಯಾಧಾರದ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು:

ಉ) ಇದುವರೆಗೂ ಎಷ್ಟು ಜನ ಅದಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ?

**ಡಾ: ವೈ. ನಾಗಪ್ಪ (ಮಾನ್ಯ ಸಮಾಜ ಕಲ್ಯಾಣ ಸಚಿವರು) :**

ಅ) ದಿನಾಂಕ: 17–03–05 ರಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದ ಬೆಂಗಳೂರು ಕೇಂದ್ರ ಕಚೇರಿಗೆ ಮಾನ್ಯ ಲೋಕಯುಕ್ತರು ಭೇಟಿ ನೀಡಿದ್ದಾರೆ.

ಆ) ಮಾನ್ಯ ಲೋಕಾಯುಕ್ತರು ನಿಗಮದ ಕೆಲಸ ಕಾರ್ಯಗಳ ಹಾಗೂ ಯೋಜನೆಗಳ ಅನುಷ್ಠಾನದ ಬಗ್ಗೆ ಕಡತಗಳನ್ನು ಪರಿಶೀಲಿಸಿದ್ದು, ನಿರ್ದಿಷ್ಟವಾಗಿ ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಪಟ್ಟ ಆಟೋರಿಕ್ಷಾ ಹಗರಣದ ಹೊರತಾಗಿ ಇನ್ನಾವುದೇ ಅಕ್ರಮಗಳನ್ನು ಪ್ರಸ್ತಾಪಿಸಿರುವುದಿಲ್ಲ.

ಇ) ಈವರೆವಿಗೂ ಮಾನ್ಯ ಲೋಕಾಯುಕ್ತರಿಂದ ಯಾವುದೇ ಲಿಖಿತ ವರದಿ ಬಂದಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

**5118 (5749)** ಶ್ರೀ ಕೃಷ್ಣ ಪಾಲೇಮಾರ್ ಜೆ. (ಸುರತ್ಕಲ್): ಮಾನ್ಯ ಬೃಹತ್, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಕರ್ಯ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಸ್ಥಾಪಿತವಾಗಿರುವ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶಗಳಲ್ಲಿ ನಿರ್ದಿಷ್ಟ ಪ್ರಮಾಣದಲ್ಲಿ ಒದಗಿಸಿಕೊಡಬೇಕೆಂಬ ನಿಯಮವನ್ನು ಸರ್ಕಾರ ಜಾರಿಗೊಳಿಸಿಲ್ಲವೆ;

ಆ) ಸ್ಥಳೀಯರಿಗೆ ಉದ್ಯೋಗ ಅವಕಾಶವನ್ನು ಒದಗಿಸಿಕೊಡುವ ಕುರಿತು ಡಾ: ಸರೋಜಿನಿ ಮಹಿಷಿಯವರ ವರದಿಯಲ್ಲಿನ ಶಿಫಾರಸ್ಸನ್ನು ಸರ್ಕಾರ ಅನುಷ್ಠಾನಗೊಳಿಸಿಲ್ಲವೆ;

ಇ) ಹಾಗಿದ್ದಲ್ಲಿ, ಅದನ್ನು ಕಟ್ಟು ನಿಟ್ಟಾಗಿ ಜಾರಿಗೊಳಿಸಲಾಗಿದೆಯೇ;

ಈ) ಉಲ್ಲಂಘಿಸುವ ಉದ್ದಿಮೆಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು;

ಉ) ಸ್ಥಳೀಯರಿಗೆ ನಿಗಧಿತ ಪ್ರಮಾಣದಲ್ಲಿ ಕೈಗಾರಿಕೆಗಳಲ್ಲಿ ಸಿಗಬೇಕಾದ ಉದ್ಯೋಗ ಅವಕಾಶವನ್ನು ಸಮರ್ಪಕವಾದ ರೀತಿಯಲ್ಲಿ ಲಭ್ಯವಾಗುವಂತೆ ನೋಡಿಕೊಳ್ಳಲು ಸರ್ಕಾರದ ಕ್ರಮಗಳೇನು?

**ಶ್ರೀ ಪಿ. ಜಿ. ಆರ್. ಸಿಂಧ್ಯಾ (ಮಾನ್ಯ ಬೃಹತ್, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಕರ್ಯ ಸಚಿವರು) :**

ಅ) ಜಾರಿಗೊಳಿಸಿದೆ.

ಆ) ಡಾ: ಸರೋಜಿನಿ ಮಹಿಷಿ ಸಮಿತಿ ವರದಿಯ ಶಿಫಾರಸ್ಸುಗಳನ್ವಯ ರಾಜ್ಯದಲ್ಲಿ ಹೊಸದಾಗಿ ಸ್ಥಾಪಿಸಲ್ಪಡುವ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶ ನೀಡುವ ಕುರಿತು ಕೈಗಾರಿಕೆ ನೀತಿ 2001–06ರಲ್ಲಿ ಈ ಕೆಳಕಂಡ ಷರತ್ತುಗಳನ್ನು ವಿಧಿಸಲಾಗಿದೆ.